# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:16ನೇ ಜುಲೈ, 2024**
**(ಸಮಯ: ಬೆಳಗ್ಗೆ 10.30 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀಮತಿ ಬಲ್ಕೀಸ್ ಬಾನು** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 05(94) | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ಚುನಾವಣಾ ಪ್ರಸ್ತಾವಗಳು

ಶ್ರೀ ಎನ್.ಎಸ್. ಬೋಸ್‌ರಾಜು (ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:-

**ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಹಾಗೂ ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿಗೆ ಸದಸ್ಯರುಗಳನ್ನು ಚುನಾಯಿಸುವ ಕುರಿತು ಮತ್ತು 2024-25ನೇ ಸಾಲಿನ ವಿಧಾನ ಮಂಡಲದ ಜಂಟಿ ಸಮಿತಿಗಳು ಹಾಗೂ ವಿಧಾನ ಪರಿಷತ್ತಿನ ಈ ಕೆಳಕಂಡ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಚುನಾಯಿಸುವ ಕುರಿತು.**

ಅ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 259(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಒಂಭತ್ತು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಆ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 250(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕುಬಾಧ್ಯತಾ ಸಮಿತಿಗೆ ಏಳು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಇ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 349(2)ನೇ ನಿಯಮದ ಅನುಸಾರವಾಗಿ ಈ ಸಭೆ **ವಸತಿ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಈ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 261(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಗೆ ಎಂಟು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಉ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 245(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಊ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 248ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ಯಮಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಋ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 254(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಎ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 264ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಏ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 267ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

..3..

ಐ) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಅಧಿನಿಯಮ 1994 ಕಲಂ 21(1)(viii)ರ ರೀತ್ಯಾ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

ಒ) ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿಯ ಸದಸ್ಯ ಸ್ಥಾನಕ್ಕೆ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಕಾಯಿದೆ 2016, ಸೆಕ್ಷನ್ 66(2)(ಡಿ) ರನ್ವಯ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

## 04. ಸದನ ಸಮಿತಿ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:-**

**"**ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.04.2024ರಿಂದ 06 ತಿಂಗಳುಗಳ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವವನ್ನು ಮಂಡಿಸುವುದು**"**.

## 05. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅವಧಿ ಪೂರ್ವಕ್ಕೂ ಮುನ್ನ ಜನಿಸಿದ ಮಕ್ಕಳಲ್ಲಿ ರಕ್ತದ ಕೊರತೆ ಹಾಗೂ ಅಪೌಷ್ಠಿಕತೆಯಿಂದ ಬಳಲುತ್ತಿರುವ ಸಮಸ್ಯೆಯು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ಹಾಗೂ ಸೂಕ್ತ ವೈದ್ಯಕೀಯ ನೆರವು ನೀಡುವ ಕುರಿತು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ದಿನಾಂಕ:15.05.2024ರಂದು ಹುಬ್ಬಳ್ಳಿ ನಗರದಲ್ಲಿ ಹತ್ಯೆಯಾದ ಅಂಜಲಿ ಮೋಹನ ಅಂಬಿಗ ಇವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತರ ಕುಟುಂಬಕ್ಕೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರುವ ಹಾಗೂ ರಾಜ್ಯದಲ್ಲಿ ಕೊಲೆ ಹತ್ಯೆ ಪ್ರಕರಣದಲ್ಲಿ ಭಾಗಿಯಾದವರನ್ನು ನಿಷ್ಪಕ್ಷಪಾತ ತನಿಖೆಗೆ ಒಳಪಡಿಸಿ ಫಾಸ್ಟ್ ಟ್ರ್ಯಾಕ್ ಕೋರ್ಟ್ ಮುಖಾಂತರ ಅತೀ ಶೀಘ್ರದಲ್ಲಿ ಶಿಕ್ಷೆಯಾಗುವಂತೆ ಮಾಡುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಅಡಗೂರ್ ಹೆಚ್. ವಿಶ್ವನಾಥ್** ಅವರು ಕಾವೇರಿ ನದಿ ನೀರಿನ ನ್ಯಾಯ ಮಂಡಳಿ ತೀರ್ಪಿನಿಂದ ಕರ್ನಾಟಕದ ಕಾವೇರಿ ಕೊಳ್ಳದ ಎಂಟು ಜಿಲ್ಲೆಗಳಲ್ಲಿ ಆಗಿರುವ/ಆಗುತ್ತಿರುವ ನೀರಿನ ಸಮಸ್ಯೆ, ಅನಾಹುತ ಹಾಗೂ ದುಸ್ಥಿತಿಗಳ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦4. **ಶ್ರೀ ಡಿ.ಎಸ್. ಅರುಣ್** ಅವರು 2022-23ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ಲೆಕ್ಕಶೀರ್ಷಿಕೆಗಳಿಗೆ ಹಂಚಿಕೆಯಾದ ಹಣದಲ್ಲಿ ಬಳಕೆಯಾಗದೆ ಉಳಿದ ಅನುದಾನವನ್ನು ಸಂಚಿತ ನಿಧಿಗೆ ವರ್ಗಾವಣೆಗೊಳಿಸದೆ ಅಮಾನತ್ತು ಖಾತೆಯಲ್ಲೆ ಉಳಿಸಿರುವ ವಿಚಾರದ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ರಾಜ್ಯದ ಇತರೆ ಭಾಗಗಳಿಂದ ಕರಾವಳಿಗೆ ಸಂಪರ್ಕ ಕೊಂಡಿಯಾಗಿರುವ ಘಾಟಿ ಪರಿಸರದಲ್ಲಿ ಬರುವ ಹೆದ್ದಾರಿಯಲ್ಲಿ ಹೆಚ್ಚು ಮಳೆಯಿಂದಾಗಿ ರಸ್ತೆ ಕುಸಿತದಿಂದ ಸಂಚಾರ ವ್ಯತ್ಯಯ ಉಂಟಾಗುತ್ತಿರುವುದನ್ನು ತಪ್ಪಿಸಲು ಶಾಶ್ವತ ಮತ್ತು ದೀರ್ಘಕಾಲಿಕ ಉಪಯೋಗದ ಯೋಜನೆಯನ್ನು ಸರ್ಕಾರ ರೂಪಿಸದಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಭೂರಹಿತರಿಗೆ ಹಾಗೂ ಬಡರೈತರಿಗೆ ಸರ್ಕಾರ ನೀಡಿರುವ ಭೂಮಿಗೆ ಪಹಣಿಯಲ್ಲಿ ಪಿ.ನಂ. ನಮೂದಿಸದಿರುವುದರಿಂದ ಹಾಗೂ ಸದರಿ ಭೂಮಿಯನ್ನು ಇತರರಿಗೆ ಪರಭಾರೆ ಮಾಡಲು ವಿಧಿಸಿರುವ ನಿರ್ಬಂಧವನ್ನು ಸಡಿಲಿಸದೆ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಎನ್. ರವಿಕುಮಾರ್** ಅವರು ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ ಭೂ ಪರಿವರ್ತನೆ ಮಾಡಿ ಮಾರಾಟ ಮಾಡುತ್ತಿರುವುದರಿಂದ ದೇವಸ್ಥಾನಗಳ ಸಮೀಪದಲ್ಲಿ ಅಕ್ರಮ ಕಟ್ಟಡಗಳನ್ನು ನಿರ್ಮಿಸಿರುವ ಕಾರಣ ಗಲಭೆಗಳು ಉಂಟಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಯು.ಬಿ. ವೆಂಕಟೇಶ್** ಅವರು ಯುನೋಕಾಯಿನ್ ಟೆಕ್ನಾಲಜೀಸ್ ಕಂಪನಿ ಸರ್ವರ್ ಹ್ಯಾಕ್ ಮಾಡಿ ಕೋಟ್ಯಾಂತರ ರೂಪಾಯಿ ಮೌಲ್ಯದ ಬಿಟ್ ಕಾಯಿನ್ ಕಳ್ಳತನ ಮಾಡಿದ ಸಂಘಟಿತ ಕೃತ್ಯದಲ್ಲಿನ ಆಪಾದಿತರು ಮತ್ತು ಹಗರಣದ ಬಗ್ಗೆ ಪ್ರಗತಿಯಲ್ಲಿರುವ ಸಿ.ಐ.ಡಿ. ವಿಚಾರಣೆ ಮತ್ತು ವರದಿ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ

| | |
|---|---|
| **ಶ್ರೀಯುತರುಗಳಾದ:-**<br>**ಎನ್. ರವಿಕುಮಾರ್, ಸಿ.ಟಿ. ರವಿ, ಡಿ.ಎಸ್. ಅರುಣ್, ಭಾರತಿ ಶೆಟ್ಟಿ, ಎಸ್.ವ್ಹಿ. ಸಂಕನೂರ ಹಾಗೂ ಇತರರು** | ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು |

..5..

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ರಾಜ್ಯದ ವಿದ್ಯಾರ್ಥಿಗಳಿಗೆ ನೀಟ್ ಪರೀಕ್ಷೆಯಿಂದ ಉಂಟಾದ ಅನ್ಯಾಯದ ಬಗ್ಗೆ ದಿನಾಂಕ:15.07.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:04(54)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಐವನ್ ಡಿ'ಸೋಜಾ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ವಿತರಿಸಿದ ವಸ್ತುಗಳ ಕುರಿತು ದಿನಾಂಕ:15.07.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:06(21)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎನ್. ರವಿಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**